ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 26-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಐತಿಹಾಸಿಕ ದಾಖಲೆಗಳ – ಛಾಯಾಚಿತ್ರ ಪ್ರದರ್ಶನ ಮತ್ತು ಬ್ರಿಟೀಷ್ ಆಡಳಿತದ ದಾಖಲೆ ಪುಸ್ತಕಗಳನ್ನು ಸಂಶೋಧನೆಗಾಗಿ ಅನಾವರಣ<br><br>ಉದ್ಘಾಟನೆ ಮತ್ತು ಪುಸ್ತಕ ಅನಾವರಣ:<br><br>ಶ್ರೀಮತಿ ಉಮಾಶ್ರೀ,<br>ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ ಸಚಿವರು<br><br>ಅಧ್ಯಕ್ಷತೆ:<br><br>ಶ್ರೀ ಆರ್. ರೋಷನ್‌ಬೇಗ್,<br>ನಗರಾಭಿವೃದ್ಧಿ , ಹಜ್ ಸಚಿವರು | 26-08-2016<br><br>ಶುಕ್ರವಾರ<br><br>ಬೆಳಿಗ್ಗೆ<br><br>11-00 ಗಂಟೆಗೆ | ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಬೆಂಗಳೂರು |

## ಮಾಧ್ಯಮ ಪ್ರತಿನಿಧಿಗಳ ಗಮನಕ್ಕೆ

ಭಾರತದ ಘನತೆವೆತ್ತ ರಾಷ್ಟ್ರಪತಿಯವರು ಆಗಸ್ಟ್ 27 ಮತ್ತು 28 ರಂದು ಬೆಂಗಳೂರಿಗೆ ಭೇಟಿ ನೀಡಲಿದ್ದು, ಆಗಸ್ಟ್ 27 ರಂದು ಎಚ್.ಎ.ಎಲ್. ವಿಮಾನ ನಿಲ್ದಾಣದಲ್ಲಿ ಅವರ ಆಗಮನ ಮತ್ತು 28 ರಂದು ಅವರ ನಿರ್ಗಮನದ ಕಾರ್ಯಕ್ರಮಕ್ಕೆ ಮಾನ್ಯತೆ ಪಡೆದ ಮಾಧ್ಯಮ ಪ್ರತಿನಿಧಿಗಳಿಗೆ ಹಾಗೂ ಇಸ್ಕಾನ್ ಮತ್ತು ರಾಷ್ಟ್ರೀಯ ಕಾನೂನು ಶಾಲೆಯಿಂದ ಆಮಂತ್ರಣ ಪಡೆದ ಮಾಧ್ಯಮ ಪ್ರತಿನಿಧಿಗಳಿಗೆ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಆಗಸ್ಟ್ 26 ರಂದು ಬೆಳಿಗ್ಗೆ 11-00 ಗಂಟೆಯಿಂದ ಪಾಸ್‌ಅನ್ನು ವಿತರಿಸಲಿದ್ದಾರೆ.

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಪೂರ್ವಭಾವಿ ಪರೀಕ್ಷೆ ಮುಂದೂಡಿದೆ

ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ 'ಎ' ವೃಂದದ ಒಟ್ಟು 25 ಹುದ್ದೆಗಳ ಸಂಬಂಧ ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ: 25-9-2016 ರ ಭಾನುವಾರದಂದು ಗಣಕ ಯಂತ್ರದ ಮೂಲಕ ನೇಮಕಾತಿ ಪರೀಕ್ಷೆ (Computer Based Recruitment Test - CBRT) ಮುಖಾಂತರ ನಡೆಸಲು ನಿರ್ಧರಿಸಿದ್ದು, ಕಾರಣಾಂತರಗಳಿಂದಾಗಿ ಸದರಿ ಪರೀಕ್ಷೆಯನ್ನು ದಿನಾಂಕ: 18-9-2016 ರ ಭಾನುವಾರದಂದು ನಡೆಸಲು ನಿಗದಿಪಡಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

# ಶ್ರೀ ಪ್ರಸನ್ನ ವೀರಾಂಜನೇಯಸ್ವಾಮಿ ದೇವಸ್ಥಾನ

ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)

ಬೆಂಗಳೂರು ಮಹಾಲಕ್ಷ್ಮೀಪುರದಲ್ಲಿ ನೆಲೆಸಿರುವ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ಶ್ರೀ ಪ್ರಸನ್ನ ವೀರಾಂಜನೇಯಸ್ವಾಮಿಗೆ 41 ನೇ ವರ್ಷದ ನವನೀತ ಅಲಂಕಾರ ಮಹೋತ್ಸವ ಆಗಸ್ಟ್ 27 ರಂದು ಕೊನೆ ಶ್ರಾವಣ ಶನಿವಾರದ ಪ್ರಯುಕ್ತ ಬೆಣ್ಣೆ ಅಲಂಕಾರವನ್ನು ಏರ್ಪಡಿಸಲಾಗಿದೆ.

## ಉದ್ಯೋಗ ಮೇಳ

ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)

ಉದ್ಯೋಗ ವಿನಿಮಯ ಕಛೇರಿ, ಏಷ್ಯಾಟಿಕ್ ಕಟ್ಟಡ (ಜನತಾ ಬಜಾರ್) 2 ನೇ ಮಹಡಿ, ಕೆ.ಜಿ. ರಸ್ತೆ, ಬೆಂಗಳೂರು –9 ಇವರ ಆಶ್ರಯದಲ್ಲಿ ಆಗಸ್ಟ್ 27 ರಂದು ಬೆಳಿಗ್ಗೆ 10–00 ಗಂಟೆಯಿಂದ ಸಂಜೆ 4–00 ಗಂಟೆಯವರೆಗೆ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ರೇವಾ ಯೂನಿವರ್ಸಿಟಿ, ಬಾಗಲೂರು ಮುಖ್ಯ ರಸ್ತೆ, ಯಲಹಂಕ, ಬೆಂಗಳೂರು – 560 064 ಇಲ್ಲಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಕೃಷಿ ಸಚಿವ ಕೃಷ್ಣಭೈರೇಗೌಡ ಅವರು ಉದ್ಯೋಗ ಮೇಳವನ್ನು ಉದ್ಘಾಟಿಸಲಿದ್ದಾರೆ.

## ಕಾವೇರಿ ಜಲವಿವಾದ ಸಂಬಂಧಿಸಿದಂತೆ ಚರ್ಚಿಸಲು ಸಧ್ಯದಲ್ಲೇ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಸಭೆ – ಎಂ.ಬಿ. ಪಾಟೀಲ್

ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)

ಕಾವೇರಿ ಜಲವಿವಾಧಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಸಧ್ಯದಲ್ಲೇ ವಿಧಾನ ಮಂಡಲದ ಸಧನದ ಮುಖಂಡರು, ಸಂಸದರು ಮತ್ತು ಆ ಭಾಗದ ಪ್ರಮುಖರ ಸಭೆಯನ್ನು ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಕರೆಯಲಾಗುವುದು ಎಂದು ಜಲ ಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸುದ್ಧಿಗಾರರೊಂದಿಗೆ ಮಾತನಾಡಿದ ಸಚಿವರು, ರಾಜ್ಯದ ಕಾವೇರಿ ಕಣಿವೆ ಪ್ರದೇಶಗಳಲ್ಲಿ ಮಳೆನೀರು ಸಂಗ್ರಹ ಪ್ರಮಾಣ ಅತಿ ಕಡಿಮೆ ಇದ್ದು ನೀರು ಕುಡಿಯುವ ನೀರಿಗೆ ಮೀಸಲಿಡಲಾಗುವುದು ಎಂದರು.

ಪ್ರಸಕ್ತವಾಗಿ ರಾಜ್ಯದಲ್ಲಿರುವ ಎಲ್ಲಾ ನೀರಾವರಿ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕೃಷ್ಣ ಮೇಲ್ದಂಡೆ ಮೂರನೆ ಹಂತದ ಯೋಜನೆ ಸೇರಿದಂತೆ ಸುಮಾರು ಒಂದು ಲಕ್ಷ ಕೋಟಿ ರೂಪಾಯಿ ಅಗತ್ಯವಿದ್ದು ಮುಂದಿನ ಎರಡು ಆಯವ್ಯಯಗಳಲ್ಲಿ ನೀರಾವರಿ ಯೋಜನೆಗೆ ಹೆಚ್ಚು ಹಣ ಮೀಸಲಿಡುವಂತೆ ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಲಾಗುವುದು ಎಂದು ಮಾತನಾಡಿದ ನೀರಾವರಿ ಸಚಿವರು ಕೃಷ್ಣಾ ಮೇಲ್ದಂಡೆ ಮೂರನೇ

ಹಂತ ಹೊರತುಪಡಿಸಿ ಉಳಿದ ಎಲ್ಲಾ ನೀರಾವರಿ ಯೋಜನೆಗಳ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮುಂಬರುವ ನವೆಂಬರ್ ತಿಂಗಳಲ್ಲಿ ಏಷ್ಯಾದಲ್ಲೇ ಅತಿದೊಡ್ಡದಾದ ಹನಿ ನೀರಾವರಿ ಯೋಜನೆಗೆ ಚಾಲನೆ ನೀಡಲಾಗುವುದು ಎಂದ ಸಚಿವರು ರಾಜ್ಯದಲ್ಲಿರುವ ಜಲಾಶಯಗಳ ಸುರಕ್ಷತೆಗೆ ಆದ್ಯತಾ ಕ್ರಮ ಕೈಗೊಳ್ಳಲಾಗಿದ್ದು ಈ ಸಂಬಂಧ ವಿಶ್ವಬ್ಯಾಂಕ್ ವತಿಯಿಂದ 443 ಕೋಟಿ ರೂ. ನೆರವನ್ನು ಪಡೆಯಲಾಗಿದೆ ಎಂದರು.

ಮೇಕೆದಾಟು ಯೋಜನೆಯಲ್ಲಿ ಕೆಲವು ನಗರಗಳಿಗೆ ಕುಡಿಯುವ ನೀರು ಸರಬರಾಜು ಹಾಗೂ ವಿದ್ಯುತ್ ಉತ್ಪಾದನೆಗೆ ಆದ್ಯತೆ ನೀಡುವ ವಿಸ್ತೃತ ಯೋಜನಾ ವರದಿ ಸಿದ್ದವಿದೆ ಎಂದು ಮಾತನಾಡಿದ ನೀರಾವರಿ ಸಚಿವರು ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಅರ್ಕಾವತಿ ಯೋಜನೆ ಪುನಶ್ಚೇತನಕ್ಕೆ ಕರೆದಿದ್ದ ಅಂತರರಾಷ್ಟ್ರೀಯ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಸಂಸ್ಥೆ ಮುಂದೆ ಬಾರದ ಹಿನ್ನೆಲೆಯಲ್ಲಿ ಇಲಾಖೆಯ ಮೂಲಕವೇ ಪುನಶ್ಚೇತನಕ್ಕೆ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ನೀರಾವರಿ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ಕೆಪಿಪಿ/ಕೆಎಂ

**ಸರ್ಕಾರಕ್ಕೆ ಒಳ್ಳೆಯ ಹೆಸರು ಬರಬೇಕಾದರೆ ಸರ್ಕಾರಿ ನೌಕರರ ಪಾತ್ರ ಅತಿ ಮುಖ್ಯ: –ಸಿದ್ದರಾಮಯ್ಯ**

ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)

ರಾಜಕಾರಣಿಗಳು ಹಾಗೂ ಸರ್ಕಾರಿ ನೌಕರರ ಬಗ್ಗೆ ಸಮಾಜದಲ್ಲಿ ಇತ್ತೀಚೆಗೆ ಸಿನಿಕತನ ಆರಂಭವಾಗಿದೆ ಹೀಗಾಗಿ ನೌಕರರು ಎಷ್ಟು ದಕ್ಷತೆಯಿಂದ ಕರ್ತವ್ಯ ನಿರ್ವಹಿಸುತ್ತೀರಿ ಎನ್ನುವುದರ ಮೇಲೆ ಸರ್ಕಾರದ ಗೌರವ ನಿಂತಿದೆ, ಆದ್ದರಿಂದ ನೌಕರರು ದಕ್ಷತೆ, ಪ್ರಾಮಾಣಿಕತೆ ಹಾಗೂ ಜನಮುಖಿವಾಗಿ ಕೆಲಸ ನಿರ್ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ವಿಧಾನ ಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ ಇಂದು ಕರ್ನಾಟಕ ಸಚಿವಾಲಯವು ನೌಕರರ ಸಂಘದ ವಜ್ರಮಹೋತ್ಸವ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿ ಅವರು ಜನಸಾಮಾನ್ಯರು ಕೆಲಸ ಮಾಡುವಾಗ ವಿಳಂಬಧೋರಣೆ ಸರಿಯಲ್ಲ ಕಾಲಮಿತಿಯೊಳಗೆ ಕೆಲಸ ಮಾಡಬೇಕು ಎಂದು ಮಾತನಾಡಿದ ಮುಖ್ಯಮಂತ್ರಿಗಳು

ಮಾಹಿತಿ ಹಕ್ಕು ಕಾಯ್ದೆ ಜಾರಿಯಾಗಿರುವುದರಿಂದ ಜನರಲ್ಲೂ ಜಾಗೃತಿ ಉಂಟಾಗಿದೆ ಅದರಂತೆ ನೌಕರರು ಜಾಗೃತಿಯಂತೆ ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದರು.

ಲಂಚ ಪಡೆದರೆ ಮಾತ್ರ ಭ್ರಷ್ಠಾಚಾರ ಅಲ್ಲ ಕರ್ತವ್ಯದಲ್ಲಿ ವಿಳಂಬ ಧೋರಣೆ ಸ್ವಜನ ಪಕ್ಷಪಾತ ಮಾಡಿದರೂ ಭ್ರಷ್ಠಾಚಾರವೇ ಎಂದು ಮಾತನಾಡಿದ ಮುಖ್ಯಮಂತ್ರಿ ಅವರು ಕೇಂದ್ರ ಸರ್ಕಾರಿ ನೌಕರರಿಗೆ ಸರಿಸಮನಾಗಿ ವೇತನ ನೀಡಬೇಕು ಎಂಬ ಬೇಡಿಕೆ ಬಹುದಿನಗಳಿಂದ ಕೇಳಿಬರುತ್ತಿದೆ. ರಾಜ್ಯ ಸರ್ಕಾರಿ ನೌಕರರ ವೇತನ ಪರಿಷ್ಕರಣೆ ಕುರಿತಂತೆ ಚರ್ಚಿಸಿ ವೇತನ ಆಯೋಗವನ್ನು ರಚಿಸುವ ಸಂಬಂಧ ಪರಿಶೀಲನೆ ನಡೆಸಲಾಗುವುದು ಎಂದರು.

ಸಚಿವಾಲಯದ ನೌಕರರ ಸಂಘವು ಸ್ವಂತ ಕಛೇರಿ ಕಟ್ಟಡ ನಿರ್ಮಿಸಲು ನಿವೇಶನ ಕೋರಿದ್ದು ಈ ಸಂಬಂಧ ಕ್ರಮ ಜರುಗಿಸಲಾಗುವುದು ಎಂದು ಭರವಸೆ ನೀಡಿದ ಮುಖ್ಯಮಂತ್ರಿ ಅವರು ವಿಧಾನ ಮಂಡಲದ ಅಧಿವೇಶನ ನಡೆಯುವ ಸಂದರ್ಭದಲ್ಲಿ ಕೆಲವು ಸಿಬ್ಬಂದಿಗಳಿಗೆ ನೀಡುವ ವಿಶೇಷ ಭತ್ಯೆಯನ್ನು ಸಚಿವಾಲಯದ ಸಿಬ್ಬಂದಿಗಳಿಗೂ ನೀಡಬೇಕು ಎಂಬ ಬೇಡಿಕೆಯನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಸರ್ಕಾರ ನೌಕರರ ಬೇಡಿಕೆಗಳನ್ನು ಈ ಹಿಂದಿನಿಂದಲೂ ಸಹಾನುಭೂತಿಯಿಂದ ಪರಿಶೀಲಿಸಿದೆ ಎಂದು ಮಾತನಾಡಿದ ಮುಖ್ಯಮಂತ್ರಿ ಅವರು ಸರ್ಕಾರಿ ನೌಕರರು ಶ್ರೀಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡಿದಲ್ಲಿ ಮಾತ್ರ ಸರ್ಕಾರಕ್ಕೆ ಮತ್ತು ನೌಕರರಿಗೆ ಗೌರವ ಮತ್ತು ಮನ್ನಣೆ ಸಿಗುತ್ತದೆ ಎಂದರು.

ನಗರಾಭಿವೃದ್ಧಿ ಹಾಗೂ ಹಜ್ ಸಚಿವ ರೋಷನ್‌ಬೇಗ್, ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಉಮಾಶ್ರೀ, ನೀರಾವರಿ ಸಚಿವ ಎಂ.ಬಿ.ಪಾಟೀಲ್ ವಿಧಾನ ಪರಿಷತ್ ಸದಸ್ಯ ಕೆ.ಸಿ. ಕೊಂಡಯ್ಯ, ಸಂಘದ ಅಧ್ಯಕ್ಷರಾದ ಮಹಾದೇವಯ್ಯ ಮಠಪತಿ ಸಂಘದ ಪದಾಧಿಕಾರಿಗಳು ಹಾಗೂ ಸಚಿವಾಲಯದ ನೌಕರರು ಸಮಾರಂಭದಲ್ಲಿ ಹಾಜರಿದ್ದರು.

**ಕೆಪಿಪಿ/ಕೆಎಂ**

# ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2015 ನೇ ಸಾಲಿನ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿನ ಹಿರಿಯ ಸಹಾಯಕರ 31 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳನ್ನು ಆಯ್ಕೆಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯ ಅಧಿಸೂಚನೆಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in ನ home page under provisional selection list ರಡಿಯಲ್ಲಿ ಅಭ್ಯಥಿಗಳ ಮಾಹಿತಿಗಾಗಿ ಪ್ರಕಟಿಸಿದೆ. ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು ಇವರಿಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ.

# ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಆಗಸ್ಟ್ 25 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 30-06-2015 ರ ಅಧಿಸೂಚಿಸಲಾಗಿದ್ದ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿನ 91 ಕಿರಿಯ ಸಹಾಯಕರ ಹುದ್ದೆಗಳ (ಉಳಿಕೆ ಮೂಲವೃಂದ =89 & ಹೈದರಾಬಾದ್ ಕರ್ನಾಟಕ ವೃಂದ =02) ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 24-08-2016 ರಂದು ಆಯೋಗದ ಅಂತರ್ಜಾಲ ತಾಣ http://kpsc.kar.nic.in ದಲ್ಲಿ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಈ ಆಯ್ಕೆಪಟ್ಟಿ ಪ್ರಕಟಿಸಿದ 15 ದಿನಗಳೊಳಗೆ ಕಾರ್ಯದರ್ಶಿ,ಕರ್ನಾಟಕ ಲೋಕಸೇವಾ ಆಯೋಗ, "ಉದ್ಯೋಗ ಸೌಧ" ಬೆಂಗಳೂರು -560 001 ಇವರಿಗೆ ಸಲ್ಲಿಸಬಹುದು ದಿನಾಂಕ: 7-9-2016 ರ ನಂತರ ಸ್ವೀಕರಿಸಲಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.